# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 140

ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 05-07-2023

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ, ನಗರ ಸಾರಿಗೆ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಾರಿಗೆಯಲ್ಲಿ ಪದವಿ ಹಾಗೂ ಸ್ನಾತಕೋತ್ತರ ಪದವಿ ಶಿಕ್ಷಣದವರೆವಿಗೂ ಎಲ್ಲಾ ವಿದ್ಯಾರ್ಥಿಗಳು (ಪುರುಷ) ಒಳಗೊಂಡಂತೆ ಉಚಿತ ಸಾರಿಗೆ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ. | ಹಾಗಿದ್ದಲ್ಲಿ, ವಿದ್ಯಾರ್ಥಿಗಳೆಲ್ಲರಿಗೂ ಉಚಿತ ಸಾರಿಗೆ ವ್ಯವಸ್ಥೆಯನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; | 1ನೇ ತರಗತಿಯಿಂದ 7ನೇ ತರಗತಿವರೆಗಿನ ಎಲ್ಲಾ ವಿದ್ಯಾರ್ಥಿಗಳಿಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಎಲ್ಲಾ ತರಗತಿಯ ವಿದ್ಯಾರ್ಥಿಗಳಿಗೆ ಸಾರಿಗೆ ಸಂಸ್ಥೆಗಳಿಂದ ಉಚಿತ ಬಸ್ ಪಾಸ್ ವಿತರಣೆ ಮಾಡಲಾಗುತ್ತಿದೆ.<br><br>ಮುಂದುವರೆದು, ದಿನಾಂಕ:11.06.2023 ರಿಂದ ಶಕ್ತಿ ಯೋಜನೆಯಡಿ ರಾಜ್ಯದ ಎಲ್ಲಾ ಮಹಿಳೆಯರಿಗೆ (ವಿದ್ಯಾರ್ಥಿನಿಯರೂ ಸೇರಿದಂತೆ) ಉಚಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಲಾಗಿದೆ.<br><br>ಇನ್ನುಳಿದಂತೆ ಪದವಿ, ಸ್ನಾತಕೋತ್ತರ ಪದವಿವರೆಗಿನ ಎಲ್ಲಾ ವಿದ್ಯಾರ್ಥಿಗಳಿಗೆ ರಿಯಾಯಿತಿ ದರದಲ್ಲಿ ವಿದ್ಯಾರ್ಥಿ ಪಾಸುಗಳನ್ನು ವಿತರಣೆ ಮಾಡಲಾಗುತ್ತಿದ್ದು, ಉಚಿತ ಸಾರಿಗೆ ಸೌಲಭ್ಯ ಒದಗಿಸುವ ಪ್ರಸ್ತಾವನೆ ಇರುವುದಿಲ್ಲ. |
| ಇ. | ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಉಚಿತ ಸಾರಿಗೆ ವ್ಯವಸ್ಥೆಯನ್ನು ವಿದ್ಯಾರ್ಥಿಗಳಿಗೆ ನೀಡಲಾಗುವುದು? | |

ಸಂಖ್ಯೆ: ಟಿಡಿ 78 ಟಿಸಿಕ್ಯೂ 2023

(ರಾಮಲಿಂಗಾ ರೆಡ್ಡಿ)

ಸಾರಿಗೆ ಮತ್ತು ಮುಜರಾಯಿ ಸಚಿವರು